ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ

DKC:27011/157/2019

ಕನ್ನಡ ಭವನ, ಜೆ.ಸಿ.ರಸ್ತೆ,
ಬೆಂಗಳೂರು, ದಿನಾಂಕ:04.02.2020.

**ಕಛೇರಿ ಆದೇಶ**

ವಿಷಯ : 2019-20ನೇ ಸಾಲಿನಲ್ಲಿ ಜಾನಪದ ಜಾತ್ರೆ ಏರ್ಪಡಿಸುವ ಕುರಿತು.
ಉಲ್ಲೇಖ: ಸರ್ಕಾರ ಆದೇಶ ಸಂಖ್ಯೆ: ಕಸಂವಾ 266 ಕಸಧ 2019, ದಿನಾಂಕ:19.12.2019.

********

**ಪ್ರಸ್ತಾವನೆ:**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಜಾನಪದ ಜಾತ್ರೆ ಕಾರ್ಯಕ್ರಮಕ್ಕೆ ವಿಶೇಷ ಘಟಕ ಯೋಜನೆಯಡಿ ಲೆಕ್ಕ ಶೀರ್ಷಿಕೆ:2205-0-102-1-44-422ರಡಿ ರೂ.87.00ಲಕ್ಷ (ರೂಪಾಯಿ ಎಂಭತ್ತೇಳು ಲಕ್ಷಗಳು ಮಾತ್ರ) ಹಾಗೂ ಗಿರಿಜನ ಉಪಯೋಜನೆಯಡಿ ಲೆಕ್ಕ ಶೀರ್ಷಿಕೆ:2205-00-796-0-01-423ರಡಿ ರೂ.75.00 ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷಗಳು ಮಾತ್ರ)ಗಳನ್ನು ಉತ್ತರ ಕನ್ನಡ, ಹಾವೇರಿ, ಧಾರವಾಡ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಏರ್ಪಡಿಸಲು ಪ್ರತಿ ಜಿಲ್ಲೆಗೆ ವಿಶೇಷ ಘಟಕ ಯೋಜನೆಯಡಿ ರೂ.17,40,000/- (ರೂಪಾಯಿ ಹದಿನೇಳು ಲಕ್ಷದ ನಲವತ್ತು ಸಾವಿರಗಳು ಮಾತ್ರ) ಗಳನ್ನು ಹಾಗೂ ಗಿರಿಜನ ಉಪಯೋಜನಯಡಿ ರೂ.15,00,000/-(ರೂಪಾಯಿ ಹದಿನೈದು ಲಕ್ಷ ಮಾತ್ರ) ಗಳನ್ನು ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು ರವರಿಗೆ ಬಿಡುಗಡೆ ಮಾಡಲು ಈ ಮುಂದಿನಂತೆ ಆದೇಶಿಸಲಾಗಿದೆ.

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಜಾನಪದ ಜಾತ್ರೆಯನ್ನು 2019-2020ನೇ ಸಾಲಿನಲ್ಲಿ ಉತ್ತರ ಕನ್ನಡ, ಹಾವೇರಿ, ಧಾರವಾಡ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲು ಪ್ರತಿ ಕಾರ್ಯಕ್ರಮಕ್ಕೆ ವಿಶೇಷ ಘಟಕ ಯೋಜನೆಯಡಿ ಲೆಕ್ಕ ಶೀರ್ಷಿಕೆ:2205-0-102-1-44-422ರಡಿ ರೂ.87.00ಲಕ್ಷ (ರೂಪಾಯಿ ಎಂಭತ್ತೇಳು ಲಕ್ಷಗಳು ಮಾತ್ರ)ಹಾಗೂ ಗಿರಿಜನ ಉಪಯೋಜನೆಯಡಿ ಲೆಕ್ಕಶೀರ್ಷಿಕೆ:2205-00-796-0-01-423ರಡಿ ರೂ.75.00ಲಕ್ಷ(ರೂಪಾಯಿ ಎಪ್ಪತ್ತೈದು ಲಕ್ಷಗಳು ಮಾತ್ರ)ಗಳನ್ನು ವಿಶೇಷ ಘಟಕ ಯೋಜನೆಯಡಿ ಲೆಕ್ಕ ಶೀರ್ಷಿಕೆ:2205-0-102-1-44-422ರಡಿ ರೂ.87.00 ಲಕ್ಷ(ರೂಪಾಯಿ ಎಂಭತ್ತೇಳು ಲಕ್ಷಗಳು ಮಾತ್ರ) ಹಾಗೂ ಗಿರಿಜನ ಉಪಯೋಜನೆಯಡಿ ಲೆಕ್ಕ ಶೀರ್ಷಿಕೆ:2205-00-796-0-01-423ರಡಿ ರೂ.75.00 ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷಗಳು ಮಾತ್ರ)ಗಳಲ್ಲಿ ವೆಚ್ಚ ಭರಿಸಲು ಈ ಕೆಳಕಂಡ ಷರತ್ತುಗಳೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು ಇವರಿಗೆ ಅನುದಾನ ಬಿಲ್ಲಿನ ಮೇಲೆ ಖಜಾನೆ-2ರ ಮೂಲಕ ಬಿಡುಗಡೆ ಮಾಡಲು ಆದೇಶಿಸಿದೆ.

**ಷರತ್ತುಗಳು:**

1. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಕೇಂದ್ರ ಕಛೇರಿ ಅನುಮತಿಯನ್ನು ಪಡೆದು ಕಾರ್ಯಕ್ರಮ ಏರ್ಪಡಿಸಬಹುದು ಮತ್ತು ಕೇಂದ್ರ ಕಛೇರಿ ಏರ್ಪಡಿಸುವ ಜಾನಪದ ಜಾತ್ರೆಯ ವೆಚ್ಚವನ್ನು ಭರಿಸುವುದು.
3. ಕರ್ನಾಟಕ ಪಾರದರ್ಶಕ ಅಧಿನಿಯಮ 1999-2000ನ್ನು ಕಡ್ಡಾಯವಾಗಿ ಪಾಲಿಸುವುದು.
4. ಕೇಂದ್ರ ಕಛೇರಿಯಿಂದ ನಿರ್ಧರಿಸುವ ಸ್ಥಳದಲ್ಲಿ ಕಾರ್ಯಕ್ರಮ ಏರ್ಪಡಿಸಲು ಇಲಾಖೆಯು ನೇರವಾಗಿ ಕ್ರಮ ಕೈಗೊಳ್ಳುತ್ತದೆ. ಜಾನಪದ ಜಾತ್ರೆ ಮುಗಿದ ನಂತರ ಕಲಾವಿದರ ಸಂಭಾವನೆ ಮತ್ತು ಸಂಪೂರ್ಣ ಖರ್ಚು- ವೆಚ್ಚದ ಮೊತ್ತವನ್ನು ಕೇಂದ್ರ ಕಛೇರಿಯ ಆದೇಶದ ಮೇರೆಗೆ ಸಂಬಂಧಿತರಿಗೆ [illegible]/ಆರ್.ಟಿ.ಜಿ.ಎಸ್. ಮೂಲಕ ಪಾವತಿಸುವುದು.

ನಿರ್ದೇಶಕರಿಂದ ಕರಡು ಅನುಮೋದನೆಗೊಂಡಿದೆ.

ನಿರ್ದೇಶಕರ ಪರವಾಗಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
ಬೆಂಗಳೂರು

ಪ್ರತಿ.

1. ಸರ್ಕಾರದ ಕಾರ್ಯದರ್ಶಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಉಪನಿರ್ದೇಶಕರು, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
3. ಲೆಕ್ಕಾಧಿಕಾರಿಗಳು,ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೇಂದ್ರ ಕಛೇರಿ ಬೆಂಗಳೂರು.
4. ಲೆಕ್ಕಪತ್ರಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು.
5. ಟಿ.ಎನ್.ಎಂ.ಸಿ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೇಂದ್ರ ಕಛೇರಿ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಕಡತಕ್ಕೆ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2019-20ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ ಕಸಂವಾ 29 ಕಸಧ 2019, ದಿ:22-07-2019.

2) ದಿ:04-06-2019ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯ ನಡವಳಿ.

3) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ.ಡಿಕೆಸಿ:27011/75/2019, ದಿನಾಂಕ.12-7-2019.

---

ಪ್ರಸ್ತಾವನೆ:-

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2019-20ನೇ ಸಾಲಿನ ಕ್ರಿಯಾ ಯೋಜನೆಗೆ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿ:04-06-2019ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂಬಂಧಿಸಿದಂತೆ, ಕಳೆದ ಸಾಲಿನಲ್ಲಿ ಈ ಯೋಜನೆಗಳಡಿ ಬಳಕೆಯಾಗದಿರುವ ಮೊತ್ತವು ಸೇರದಂತೆ 2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗುವ ಕಾರ್ಯಕ್ರಮಗಳಿಗೆ ಅನುಮೋದನೆ ನೀಡಲಾಗಿದೆ.

ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದನೆ ನೀಡಿರುವಂತೆ 2019-20ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗುವ ಕಾರ್ಯಕ್ರಮಗಳಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ (3)ರ ಪತ್ರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 80 ಕಸಧ 2019, ಬೆಂಗಳೂರು, ದಿನಾಂಕ:24-07-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂಬಂಧಿಸಿದಂತೆ, ಕಳೆದ ಸಾಲಿನಲ್ಲಿ ಈ ಯೋಜನೆಗಳಡಿ ಬಳಕೆಯಾಗದಿರುವ ಮೊತ್ತವು ಸೇರಿದಂತೆ 2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗುವ ಕಾರ್ಯಕ್ರಮಗಳ ಕ್ರಿಯಾ ಯೋಜನೆಗೆ ಇದರೊಂದಿಗೆ ಲಗತ್ತಿಸಿರುವ ಅನುಬಂಧಗಳಲ್ಲಿರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

1) ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು, ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.

2) 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ನಿಯಮಗಳು 2000ನ್ನು ಕಡ್ಡಾಯವಾಗಿ ಪಾಲಿಸುವುದು.

3) ಸಂಘ ಸಂಸ್ಥೆಗಳಿಗೆ ಬಿಡುಗಡೆ ಮಾಡುವ ಅನುದಾನದ ಬಗ್ಗೆ ಮಾರ್ಗಸೂಚಿಗಳನ್ನು ರೂಪಿಸಿ ಅದರನ್ವಯ ಕ್ರಮ ತೆಗೆದುಕೊಳ್ಳುವುದು.

4) ಪುಸ್ತಕ ಪ್ರಕಟಣೆ, ಖರೀದಿ, ಮಾರಾಟ, ಪ್ರೋತ್ಸಾಹಧನಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಯನ್ನು ರೂಪಿಸಿ ಅದರನ್ವಯ ಕ್ರಮ ತೆಗೆದುಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 96, ದಿ:10.07.1996ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಎಸ್. ಮಾಲತಿ) 24/7/19
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಹಾಗೂ ಸಂಸ್ಕೃತಿ ಇಲಾಖೆ,
(ಸಂಸ್ಕೃತಿ ಶಾಖೆ)

ನಿರ್ದೇಶಕರ ಪರವಾಗಿ
ಕನ್ನಡ ಸಂಸ್ಕೃತಿ ಇಲಾಖೆ
ಬೆಂಗಳೂರು

ಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ)/(ಇ&ಆರ್‌ಎಸ್‌ಎ)/(ಎ&ಇ), ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
4. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7/8) ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 80 ಕಸಧ 2019, ದಿನಾಂಕ:24-07-2019ಕ್ಕೆ

## ಅನುಬಂಧ-1

ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ 2019-20 ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸ್ಕೀಮು ವಾರು ಅನುದಾನ ಹಂಚಿಕೆ

ಲೆಕ್ಕ ಶೀರ್ಷಿಕೆ- 2205-00-102-1-44-422 – ಒಟ್ಟು ಮೊತ್ತ ರೂ.1875.00 (ರೂ.ಲಕ್ಷಗಳಲ್ಲಿ)

| ಕ್ರಮ ಸಂ. | ವಿಷಯ | ಅವಕಾಶ ಮಾಡಿಕೊಂಡಿರುವ ಮೊತ್ತ 1875.00 (ರೂ.ಲಕ್ಷಗಳಲ್ಲಿ) |
|---|---|---|
| 1. | ಸಾಂಸ್ಕೃತಿಕ ಸಂಘ ಸಂಸ್ಥೆಗಳ ಚಟುವಟಿಕೆಗಳಿಗೆ ಧನಸಹಾಯ / ವಾದ್ಯಪರಿಕರ-ವೇಷಭೂಷಣ ಖರೀದಿಗೆ / ಚಿತ್ರ-ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಧನಸಹಾಯ | 650.00 |
| 2. | 30 ಜಿಲ್ಲೆಗಳಲ್ಲಿ ಸಂಘ ಸಂಸ್ಥೆಗಳು ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪ್ರಾಯೋಜಿಸಿಸುವ ಕಲಾ ತಂಡದ ಕಲಾವಿದರಿಗೆ ಪಾವತಿಸುವ ಸಂಭಾವನೆ | 360.00 |
| 3. | ಕನ್ನಡ ವಿಶ್ವವಿದ್ಯಾನಿಲಯ ಹಂಪಿಯಲ್ಲಿ ಒನಕೆ ಓಬವ್ವ ಅಧ್ಯಯನ ಪೀಠ ಸ್ಥಾಪಿಸಲು ಮುಂದುವರೆದ ಯೋಜನೆಗಾಗಿ | 150.00 |
| 4. | 30 ಜಿಲ್ಲೆಗಳಲ್ಲಿ ಗುರು ಶಿಷ್ಯ ಪರಂಪರೆ ಯೋಜನೆಯಡಿ ಯುವ ಆಸಕ್ತ ಕಲಾವಿದರಿಗೆ ತರಬೇತಿ ನೀಡಲು | 60.00 |
| 5. | ಯಾವುದೇ ಕಲೆಯಲ್ಲಿ ಪ್ರತಿಭಾವಂತ ಪರಿಶಿಷ್ಟ ಜಾತಿಯ ಯುವ ಕಲಾವಿದರನ್ನು ಗುರುತಿಸಿ ಅವರ ನೈಪುಣ್ಯತೆಯನ್ನು ಹೆಚ್ಚಿಸಲು ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಧನಸಹಾಯ ನೀಡಲು (ಅಕಾಡೆಮಿಗಳ ಮೂಲಕ) | 30.00 |
| 6. | ಪಿಹೆಚ್.ಡಿ ಮತ್ತು ಎಂ.ಫಿಲ್ ಸಂಶೋಧನಾ ಹಸ್ತ ಪ್ರತಿಗಳ ಮುದ್ರಣಕ್ಕೆ ಧನಸಹಾಯ | 10.00 |
| 7. | ಜನಪದ ಉತ್ಸವ - 30 ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿಯ ಕಲಾವಿದರಿಗೆ ವೇದಿಕೆಯನ್ನು ಕಲ್ಪಿಸಿ ಅವರ ಕಲಾಪ್ರದರ್ಶನವನ್ನು ಏರ್ಪಡಿಸಿ ಪ್ರೋತ್ಸಾಹಿಸುವ ಕಾರ್ಯಕ್ರಮಕ್ಕಾಗಿ (30 ಜಿಲ್ಲೆಗಳಿಗೆ ತಲಾ 5.00 ಲಕ್ಷದಂತೆ 30x 5.00) | 150.00 |
| 8. | ಪ.ಜಾತಿ ಕಾಲೋನಿಗಳಲ್ಲಿ ರಂಗಮಂದಿರ/ ಸಾಂಸ್ಕೃತಿಕ ಭವನ ಮತ್ತು ಬಯಲು ರಂಗ ಮಂದಿರಗಳಿಗೆ | 150.00 |
| 9. | ಕಲಾವಿದರ ಸಮೀಕ್ಷೆ ( ಪರಿಶಿಷ್ಟ ಜಾತಿಗೆ ಸೇರಿದ ಜಿಲ್ಲಾವಾರು ಕಲಾವಿದರುಗಳ ಸಮೀಕ್ಷೆ) | 50.00 |
| 10. | ದಲಿತ ಕ್ರೈಸ್ತರು ಸಾಂಸ್ಕೃತಿಕ ಶೋಧ ಮಾಲೆ ಹಾಗೂ ಪಂಚಮ ಪತ್ರಿಕೆ ಮರು ಮುದ್ರಣ ಯೋಜನೆಗಾಗಿ (ಕರ್ನಾಟಕ ಸಾಹಿತ್ಯ ಅಕಾಡೆಮಿ ಮೂಲಕ) | 38.00 |
| 11. | ಡಾ. ಬಿ.ಆರ್. ಅಂಬೇಡ್ಕರ್ ರವರ ಬರಹ ಮತ್ತು ಭಾಷಣ ಸಂಪುಟಗಳ ಮರು ಮುದ್ರಣ (ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಮೂಲಕ | 50.00 |
| 12. | ಅಂಬೇಡ್ಕರ್ ಓದು - ಕಾಲೇಜು ವಿದ್ಯಾರ್ಥಿಗಳಿಗೆ ಅಂಬೇಡ್ಕರ್‌ರವರ ಬದುಕು ಮತ್ತು ಸಾಧನೆ ಬಗ್ಗೆ ಪರಿಚಯ ಮಾಡಿಕೊಡುವ ಕಾರ್ಯಕ್ರಮ ( ಪ್ರತಿ ಜಿಲ್ಲೆಗೆ 5 ಕಾರ್ಯಕ್ರಮಗಳಂತೆ) | 30.00 |
| 13. | ಸಂವಿಧಾನ ಸರ್ವರಿಗೂ - 4 ರಂಗಾಯಣಗಳ ಮೂಲಕ ಸಂವಿಧಾನ ಕುರಿತು ನಾಟಕ ರಚನೆ ಮಾಡಿ ರಾಜ್ಯಾದ್ಯಂತ ಪ್ರದರ್ಶಿಸುವ ಮೂಲಕ ನಮ್ಮ ಸಂವಿಧಾನದ ಬಗ್ಗೆ ಜಾಗೃತಿ ಉಂಟು ಮಾಡುವುದು | 60.00 |
| 14. | ಸರ್ಕಾರ ಸೂಚಿಸುವ ಕಾರ್ಯಕ್ರಮ | 87.00 |
| | ಒಟ್ಟು<br>ಒಟ್ಟಾರೆ ರೂಪಾಯಿ ಒಂದು ಸಾವಿರದ ಎಂಟು ನೂರ ಎಪ್ಪತ್ತೈದು ಲಕ್ಷಗಳು ಮಾತ್ರ | 1875.00 |

ನಿರ್ದೇಶಕರ ಪರವಾಗಿ
**ಕನ್ನಡ ಸಂಸ್ಕೃತಿ ಇಲಾಖೆ**
**ಬೆಂಗಳೂರು**

24/7/19
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಹಾಗೂ ಸಂಸ್ಕೃತಿ ಇಲಾಖೆ,
(ಸಂಸ್ಕೃತಿ ಶಾಖೆ)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಾನಪದ ಜಾತ್ರೆಯ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂ:ಡಿಕೆಸಿ/27011/~~156~~/2019, ದಿ:9-12-2019.
136

********

**ಪ್ರಸ್ತಾವನೆ:**

2019-20ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆಯ ಲೆಕ್ಕಶೀರ್ಷಿಕೆ 2205-00-102-1-44-422ರಡಿ ಹಾಗೂ ಗಿರಿಜನ ಉಪಯೋಜನೆ ಲೆಕ್ಕಶೀರ್ಷಿಕೆ 2205-00-796-0-01-423ಅಡಿ ಜಾನಪದ ಜಾತ್ರೆ ಏರ್ಪಡಿಸಲು ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಮಾನ್ಯ ಇಲಾಖಾ ಸಚಿವರು ಜಾನಪದ ಜಾತ್ರೆ ಆಯೋಜಿಸಲು ಅನುದಾನ ಬಿಡುಗಡೆ ಮಾಡಲು ಆದೇಶಿಸಿದೆ. ಕೂಡಲೇ ಆದೇಶ ಹೊರಡಿಸಲು ಸೂಚಿಸಿರುತ್ತಾರೆ.

ಅದರಂತೆ, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಲು ಉದ್ದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 266 ಕಸಧ 2019, ಬೆಂಗಳೂರು, ದಿನಾಂಕ:19-12-2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ಜಾನಪದ ಜಾತ್ರೆಯ ಕಾರ್ಯಕ್ರಮ ಏರ್ಪಡಿಸಲು ಈ ಕೆಳಕಂಡಂತೆ ವಿಶೇಷ ಘಟಕ ಯೋಜನೆ ಲೆಕ್ಕಶೀರ್ಷಿಕೆ 2205-00-102-1-44-422 ಅಡಿ ರೂ.87.00ಲಕ್ಷ (ರೂಪಾಯಿ ಎಂಭತ್ತೇಳು ಲಕ್ಷಗಳು ಮಾತ್ರ) ಹಾಗೂ ಗಿರಿಜನ ಉಪಯೋಜನೆ ಲೆಕ್ಕಶೀರ್ಷಿಕೆ 2205-00-796-0-01-423 ಅಡಿ ರೂ.75.00ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ರವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

| ಕ್ರ.ಸಂ. | ಜಿಲ್ಲೆಗಳು | ವಿಶೇಷ ಘಟಕ ಯೋಜನೆ | ಗಿರಿಜನ ಉಪಯೋಜನೆ |
|---|---|---|---|
| 1 | ಉತ್ತರ ಕನ್ನಡ ಜಿಲ್ಲೆ, ಕಾರವಾರ | ರೂ.17.40ಲಕ್ಷ | ರೂ.15.00ಲಕ್ಷ |
| 2 | ಹಾವೇರಿ | ರೂ.17.40ಲಕ್ಷ | ರೂ.15.00ಲಕ್ಷ |
| 3 | ಧಾರವಾಡ | ರೂ.17.40ಲಕ್ಷ | ರೂ.15.00ಲಕ್ಷ |
| 4 | ಚಿತ್ರದುರ್ಗ | ರೂ.17.40ಲಕ್ಷ | ರೂ.15.00ಲಕ್ಷ |
| 5 | ಶಿವಮೊಗ್ಗ | ರೂ.17.40ಲಕ್ಷ | ರೂ.15.00ಲಕ್ಷ |
| | ಒಟ್ಟು | **ರೂ.87.00ಲಕ್ಷ** | **ರೂ.75.00ಲಕ್ಷ** |

1. ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಣ ಮಂಜೂರು ಮಾಡಿದ್ದು, ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣಪತ್ರವನ್ನು ಪಡೆದು ಸಲ್ಲಿಸುವುದು.

ಈ ವೆಚ್ಚವನ್ನು 2019-20ನೇ ಸಾಲಿನ ವಿಶೇಷ ಘಟಕ ಯೋಜನೆ ಲೆಕ್ಕಶೀರ್ಷಿಕೆ 2205-00-102-1-44-422 ಅಡಿ ಹಾಗೂ ಗಿರಿಜನ ಉಪಯೋಜನೆ ಲೆಕ್ಕಶೀರ್ಷಿಕೆ 2205-00-796-0-01-423 ಅಡಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ: 04-07-2019ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS 19/12/19

(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ)

ಖಚಿತೀಕರಿಸಿದ ಸರದಾಗಿ
ಕನ್ನಡ ಸಂಸ್ಕೃತಿ ಇಲಾಖೆ
ಬೆಂಗಳೂರು

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.